## ದಿನಾಂಕ : 19-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ.

**ವಿಷಯದ ಸಂಖ್ಯೆ: 29/2010-11**

ಶ್ರೀ. ಬಿ.ಎಸ್. ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ರವರು ಈ ಕೆಳಕಂಡ ಸಂತಾಪ ಸೂಚಕ ನಿರ್ಣಯವನ್ನು ಮಂಡಿಸಿದರು.

ಭಾರತ ಸರ್ಕಾರದ ಮಾಜಿ ಉಪ ರಾಷ್ಟ್ರಪತಿಗಳು ಹಾಗೂ ರಾಜಸ್ಥಾನದ ಮಾಜಿ ಮುಖ್ಯಮಂತ್ರಿಗಳು ಆದ ಬೈರೋನ್ ಸಿಂಗ್ ಶೇಖಾವತ್ ರವರು ದಿನಾಂಕ: 15.05.2010 ರಂದು ದೈವಾಧೀನರಾದರೆಂದು ಈ ಸಭೆಗೆ ತಿಳಿಸಲು ವಿಷಾದಿಸುತ್ತೇನೆ. ಮೃತರು ಪತ್ನಿ ಹಾಗೂ ಪುತ್ರಿಯನ್ನು ಅಗಲಿರುತ್ತಾರೆ. ಮೃತರು ರಾಜಕೀಯ ವಲಯದಲ್ಲಿ ಅಜಾತಶತ್ರುವೆಂದೇ ಮನೆ ಮಾತಾಗಿದ್ದು ಉಪ ರಾಷ್ಟ್ರಪತಿ ಹಾಗೂ ಮೂರು ಬಾರಿ ಮುಖ್ಯಮಂತ್ರಿಗಳಂತಹ ಉನ್ನತ ಹುದ್ದೆಯನ್ನು ಅಲಂಕರಿಸಿ, ರಾಜ್ಯ ಹಾಗೂ ರಾಷ್ಟ್ರದ ಏಳಿಗೆಗೆ ಸಾಕಷ್ಟು ಶ್ರಮಿಸಿದ್ದರು. ಇವರ ಮರಣದಿಂದ ದೇಶವು ಒಳ್ಳೆಯ ನುರಿತ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ಭಗವಂತನು ಮೃತರಿಗೆ ಸದ್ಗತಿಯನ್ನು ಹಾಗೂ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ನೀಡಲೆಂದು ಈ ಸಭೆಯು ಪ್ರಾರ್ಥಿಸುತ್ತದೆ.

ಆಡಳಿತ ಪಕ್ಷದ ನಾಯಕರು ಮಂಡಿಸಿದ ಸಂತಾಪ ಸೂಚಕ ನಿರ್ಣಯವನ್ನು ಸಭೆಯು ಸರ್ವಾನುಮತದಿಂದ ಅಂಗೀಕರಿಸಿದೆ.

**ನಿರ್ಣಯ:** ಭಾರತ ಸರ್ಕಾರದ ಮಾಜಿ ಉಪ ರಾಷ್ಟ್ರಪತಿಗಳು ಹಾಗೂ ರಾಜಸ್ಥಾನದ ಮಾಜಿ ಮುಖ್ಯಮಂತ್ರಿಗಳು ಆದ ಬೈರೋನ್ ಸಿಂಗ್ ಶೇಖಾವತ್ ರವರು ದಿನಾಂಕ: 15.05.2010 ರಂದು ದೈವಾಧೀನರಾದರೆಂದು ಈ ಸಭೆಗೆ ತಿಳಿಸಲು ವಿಷಾದಿಸುತ್ತೇನೆ. ಮೃತರು ಪತ್ನಿ ಹಾಗೂ ಪುತ್ರಿಯನ್ನು ಅಗಲಿರುತ್ತಾರೆ. ಮೃತರು ರಾಜಕೀಯ ವಲಯದಲ್ಲಿ ಅಜಾತಶತ್ರುವೆಂದೇ ಮನೆ ಮಾತಾಗಿದ್ದು ಉಪ ರಾಷ್ಟ್ರಪತಿ ಹಾಗೂ ಮೂರು ಬಾರಿ ಮುಖ್ಯಮಂತ್ರಿಗಳಂತಹ ಉನ್ನತ ಹುದ್ದೆಯನ್ನು ಅಲಂಕರಿಸಿ, ರಾಜ್ಯ ಹಾಗೂ ರಾಷ್ಟ್ರದ ಏಳಿಗೆಗೆ ಸಾಕಷ್ಟು ಶ್ರಮಿಸಿದ್ದರು. ಇವರ ಮರಣದಿಂದ ದೇಶವು ಒಳ್ಳೆಯ ನುರಿತ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ಭಗವಂತನು ಮೃತರಿಗೆ ಸದ್ಗತಿಯನ್ನು ಹಾಗೂ ಅವರ ಅಗಲಿಕೆಯ ನೋವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬ ವರ್ಗದವರಿಗೆ ನೀಡಲೆಂದು ಈ ಸಭೆಯು ಪ್ರಾರ್ಥಿಸುತ್ತದೆ.

ಎಸ್.ಕೆ. ನಟರಾಜ

(ಎಸ್.ಕೆ. ನಟರಾಜ)

ಮಹಾಪೌರರು.

## ದಿನಾಂಕ : 28-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ.

**ವಿಷಯದ ಸಂಖ್ಯೆ : 35/2010-11**

ಶ್ರೀ. ಬಿ.ಎಸ್. ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ರವರು ಈ ಕೆಳಕಂಡ ಸಂತಾಪ ಸೂಚಕ ನಿರ್ಣಯವನ್ನು ಮಂಡಿಸಿದರು.

ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದ, ಶ್ರೀ.ಕೃಪಾನಂದ ರವರು ದಿನಾಂಕ:21-05-2010 ರಂದು ಬೆಳಿಗ್ಗೆ 8-30 ಕ್ಕೆ ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆಯಲ್ಲಿ 1986-87 ಸಾಲಿನಲ್ಲಿ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು, ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ದಿವಂಗತರು ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥತತೆಯಿಂದ ಸೇವೆ ಸಲ್ಲಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರು ಅವಿವಾಹಿತರಾಗಿದ್ದು, ಇಬ್ಬರು ಸಹೋದರರನ್ನು ಅಗಲಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ. ಪಿ.ಎನ್.ಸದಾಶಿವ ರವರು ಶ್ರೀ. ಬಿ.ಎಸ್. ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಪೂಜ್ಯ ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದ, ಶ್ರೀ. ಕೃಪಾನಂದ ರವರು ದಿನಾಂಕ: 21-05-2010 ರಂದು ಬೆಳಿಗ್ಗೆ 8-30 ಕ್ಕೆ ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆಯಲ್ಲಿ 1986-87 ಸಾಲಿನಲ್ಲಿ ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದು, ಸ್ವಾತಂತ್ರ್ಯ ಹೋರಾಟಗಾರರಾಗಿದ್ದ ದಿವಂಗತರು ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥತತೆಯಿಂದ ಸೇವೆ ಸಲ್ಲಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರು ಅವಿವಾಹಿತರಾಗಿದ್ದು, ಇಬ್ಬರು ಸಹೋದರರನ್ನು ಅಗಲಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಈ ಸಭೆಯು ಭಗವಂತನಲ್ಲಿ ಪ್ರಾರ್ಥಿಸುತ್ತದೆ.

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು.

## ದಿನಾಂಕ : 28-05-2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ.

**ವಿಷಯದ ಸಂಖ್ಯೆ : 36/2010-11**

ಶ್ರೀ. ಬಿ.ಎಸ್. ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ರವರು ಈ ಕೆಳಕಂಡ ಸಂತಾಪ ಸೂಚಕ ನಿರ್ಣಯವನ್ನು ಮಂಡಿಸಿದರು.

ದಿನಾಂಕ:22-05-2010 ರಂದು ಬೆಳಗ್ಗೆ ಏರ್ ಇಂಡಿಯಾ ಎಕ್ಸ್‌ಪ್ರೆಸ್ (ಐಎಕ್ಸ್-812) ಬೋಯಿಂಗ್ 737-800 ವಿಮಾನವು ಮಂಗಳೂರಿನ ಕೆಂಜಾರು ಪ್ರದೇಶದಲ್ಲಿ ಅಪಘಾತಕ್ಕೀಡಾಗಿ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ಸುಮಾರು 158 ಮಂದಿಯು ಅಸುನೀಗಿದ್ದು, 2010 ನೇ ಸಾಲಿನ ಅತಿ ದೊಡ್ಡ ದುರಂತವಾಗಿದೆ. ಈ ದುರ್ಘಟನೆಯಿಂದಾಗಿ ದೇಶಕ್ಕೆ ತುಂಬಲಾರದ ನಷ್ಟ ಉಂಟಾಗಿದ್ದು, ಈ ಅಪಘಾತದಲ್ಲಿ ಪ್ರಾಣತೆತ್ತ ಪ್ರಯಾಣಿಕರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ಅವರ ಬಂಧು ಬಳಗದವರಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಪ್ರಾರ್ಥಿಸುತ್ತೇನೆ.

ಶ್ರೀ. ಪಿ.ಎನ್.ಸದಾಶಿವ ರವರು ಶ್ರೀ. ಬಿ.ಎಸ್. ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಪೂಜ್ಯ ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** ದಿನಾಂಕ:22-05-2010 ರಂದು ಬೆಳಗ್ಗೆ ಏರ್ ಇಂಡಿಯಾ ಎಕ್ಸ್‌ಪ್ರೆಸ್ (ಐಎಕ್ಸ್-812) ಬೋಯಿಂಗ್ 737-800 ವಿಮಾನವು ಮಂಗಳೂರಿನ ಕೆಂಜಾರು ಪ್ರದೇಶದಲ್ಲಿ ಅಪಘಾತಕ್ಕೀಡಾಗಿ ವಿಮಾನದಲ್ಲಿ ಪ್ರಯಾಣಿಸುತ್ತಿದ್ದ ಸುಮಾರು 158 ಮಂದಿಯು ಅಸುನೀಗಿದ್ದು, 2010ನೇ ಸಾಲಿನ ಅತಿದೊಡ್ಡ ದುರಂತವಾಗಿದೆ. ಈ ದುರ್ಘಟನೆಯಿಂದಾಗಿ ದೇಶಕ್ಕೆ ತುಂಬಲಾರದ ನಷ್ಟ ಉಂಟಾಗಿದ್ದು, ಈ ಅಪಘಾತದಲ್ಲಿ ಪ್ರಾಣತೆತ್ತ ಪ್ರಯಾಣಿಕರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ಅವರ ಬಂಧು ಬಳಗದವರಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಈ ಸಭೆಯು ಪ್ರಾರ್ಥಿಸುತ್ತದೆ.

(ಎಸ್.ಕೆ. ನಟರಾಜ)
ಮಹಾಪೌರರು.

## ದಿನಾಂಕ: 29–05–2010 ರಂದು ನಡೆದ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ.

ವಿಷಯದ ಸಂಖ್ಯೆ:38/2010–11.

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ರವರು ಈ ಕೆಳಕಂಡ ಸಂತಾಪ ಸೂಚಕ ನಿರ್ಣಯವನ್ನು ಮಂಡಿಸಿದರು.

ದಿನಾಂಕ: 28–05–2010 ರಂದು ಬೆಳಿಗ್ಗೆ ಮಾವೋ ಉಗ್ರರು ಅಮಾನುಷ ಕೃತ್ಯದಿಂದಾಗಿ ಮುಂಬೈಗೆ ಹೊರಟಿದ್ದ ಹೌರಾ–ಕುರ್ಲಾ ಲೋಕಮಾನ್ಯ ಜ್ಞಾನೇಶ್ವರಿ ಸೂಪರ್ ಡೀಲಕ್ಸ್ ಎಕ್ಸ್‌ಪ್ರೆಸ್ ರೈಲು ಕೋಲ್ಕತ್ತಾ ಪಶ್ಚಿಮ ಮಿಡ್ನಾಪೂರ ಬಳಿ ಹಳಿ ತಪ್ಪಿದ್ದು, ಈ ಅಪಘಾತದಲ್ಲಿ ಸುಮಾರು 80ಕ್ಕೂ ಹೆಚ್ಚು ಮಂದಿ ಮೃತಪಟ್ಟಿರುತ್ತಾರೆ. ಈ ದುರ್ಘಟನೆಯಲ್ಲಿ ಸುಮಾರು 200ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಅವರುಗಳು ಶೀಘ್ರವಾಗಿ ಗುಣಮುಖರಾಗಲೆಂದು ಹಾಗೂ ಈ ಅಪಘಾತದಲ್ಲಿ ಮಡಿದ ಪ್ರಯಾಣಿಕರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ಅವರ ಬಂಧು ಬಳಗದವರಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಪ್ರಾರ್ಥಿಸುತ್ತೇನೆ.

ಶ್ರೀ.ಪಿ.ಎಸ್. ಸದಾಶಿವ ರವರು ಶ್ರೀ.ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ**:– ದಿನಾಂಕ: 28–05–2010 ರಂದು ಬೆಳಿಗ್ಗೆ ಮಾವೋ ಉಗ್ರರು ಅಮಾನುಷ ಕೃತ್ಯದಿಂದಾಗಿ ಮುಂಬೈಗೆ ಹೊರಟಿದ್ದ ಹೌರಾ–ಕುರ್ಲಾ ಲೋಕಮಾನ್ಯ ಜ್ಞಾನೇಶ್ವರಿ ಸೂಪರ್ ಡೀಲಕ್ಸ್ ಎಕ್ಸ್‌ಪ್ರೆಸ್ ರೈಲು ಕೋಲ್ಕತ್ತಾ ಪಶ್ಚಿಮ ಮಿಡ್ನಾಪೂರ ಬಳಿ ಹಳಿ ತಪ್ಪಿದ್ದು, ಈ ಅಪಘಾತದಲ್ಲಿ ಸುಮಾರು 80ಕ್ಕೂ ಹೆಚ್ಚು ಮಂದಿ ಮೃತಪಟ್ಟಿರುತ್ತಾರೆ. ಈ ದುರ್ಘಟನೆಯಲ್ಲಿ ಸುಮಾರು 200ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದು, ಅವರುಗಳು ಶೀಘ್ರವಾಗಿ ಗುಣಮುಖರಾಗಲೆಂದು ಹಾಗೂ ಈ ಅಪಘಾತದಲ್ಲಿ ಮಡಿದ ಪ್ರಯಾಣಿಕರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ಅವರ ಬಂಧು ಬಳಗದವರಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಈ ಸಭೆಯು ಪ್ರಾರ್ಥಿಸುತ್ತಿದೆ.

ಎಸ್.ಕೆ.ನಟರಾಜ

(ಎಸ್.ಕೆ.ನಟರಾಜ),

ಮಹಾಪೌರರು.

## ದಿನಾಂಕ:28-08-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:86/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದಂತಹ ಶ್ರೀ. ಮನ್ನಾರ್‌ನಾಯ್ಡು ರವರು ದಿನಾಂಕ: 20-08-2010 ರಂದು ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆ ಸದಸ್ಯರಾಗಿ, ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ, ಉತ್ತಮ ಸೇವೆ ಸಲ್ಲಿಸಿದ್ದು ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆಯಿಂದ ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿದ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದಂತಹ ಶ್ರೀ. ಮನ್ನಾರ್‌ನಾಯ್ಡು ರವರು ದಿನಾಂಕ:20-08-2010 ರಂದು ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆ ಸದಸ್ಯರಾಗಿ, ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ, ಉತ್ತಮ ಸೇವೆ ಸಲ್ಲಿಸಿದ್ದು ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆಯಿಂದ ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿದ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಸಭೆಯು ಸರ್ವಾನುಮತದಿಂದ ಪ್ರಾರ್ಥಿಸಲಾಯಿತು".

ಎಸ್.ಕೆ. ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು

# ದಿನಾಂಕ:28–08–2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ತೀರ್ಮಾನವಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:87/2010–11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದಂತಹ ಶ್ರೀ. ಮೆಹಬೂಬ್ ಖಾನ್ ರವರು ದಿನಾಂಕ: 26–08–2010 ರಂದು ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆ ಸದಸ್ಯರಾಗಿ, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿದ್ದು, ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ್ದು, ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ಆದ್ದರಿಂದ, ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ಸೂಚನೆಯನ್ನು ಮತಕ್ಕೆ ಹಾಕಲಾಗಿ ಸೂಚನೆಯು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದಂತಹ ಶ್ರೀ. ಮೆಹಬೂಬ್ ಖಾನ್ ರವರು ದಿನಾಂಕ:26–08–2010 ರಂದು ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆ ಸದಸ್ಯರಾಗಿ, ಶಿಕ್ಷಣ ಮತ್ತು ಸಾಮಾಜಿಕ ನ್ಯಾಯ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿದ್ದು, ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆ ಸಲ್ಲಿಸಿದ್ದು, ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ಆದ್ದರಿಂದ ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಭಗವಂತನಲ್ಲಿ ಸಭೆಯು ಸರ್ವಾನುಮತದಿಂದ ಪ್ರಾರ್ಥಿಸಲಾಯಿತು".

ಎಸ್.ಕೆ. ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:09-09-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯವ್ಯಯ ಸಭೆಯಲ್ಲಿ ತೀರ್ಮಾನವಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:95/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಚಲನ ಚಿತ್ರ ರಂಗದ ಹೆಸರಾಂತ ನಿರ್ದೇಶಕ ಸಿದ್ದಲಿಂಗಯ್ಯನವರ ಮಗನಾದ ದಕ್ಷಿಣ ಭಾರತದ ಹೆಸರಾಂತ ನಟ ಶ್ರೀ. ಮುರಳಿ ರವರು ಹೃದಯಘಾತದಿಂದ ದಿನಾಂಕ:08-09-2010 ರಂದು ದೈವಾಧೀನರಾಗಿರುತ್ತಾರೆ, ಇದರಿಂದ ಚಲನಚಿತ್ರ ರಂಗ ಬಡವಾಗಿರುತ್ತದೆ. ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಚಲನ ಚಿತ್ರ ರಂಗದ ಹೆಸರಾಂತ ನಿರ್ದೇಶಕ ಸಿದ್ದಲಿಂಗಯ್ಯನವರ ಮಗನಾದ ದಕ್ಷಿಣ ಭಾರತದ ಹೆಸರಾಂತ ನಟ ಶ್ರೀ. ಮುರಳಿ ರವರು ಹೃದಯಘಾತದಿಂದ ದಿನಾಂಕ:08-09-2010 ರಂದು ದೈವಾಧೀನರಾಗಿರುತ್ತಾರೆ. ಇದರಿಂದ ಚಲನಚಿತ್ರ ರಂಗ ಬಡವಾಗಿರುತ್ತದೆ. ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಸಭೆಯು ಪ್ರಾರ್ಥಿಸುತ್ತದೆ".

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:09-09-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಆಯವ್ಯಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:96/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದಂತಹ ಶ್ರೀ. ಯಜಮಾನ್ ಸಿ.ಕೃಷ್ಣಪ್ಪ ರವರು ದಿನಾಂಕ:08-09-2010 ರಂದು ಸಂಜೆ ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆಗೆ 2 ಬಾರಿ ಸದಸ್ಯರಾಗಿ ಆಯ್ಕೆಯಾಗಿದ್ದು, ಆಡಳಿತ ಪಕ್ಷದ ನಾಯಕರಾಗಿ, ಕಾಮಗಾರಿ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ, ಶಿಕ್ಷಣ ಹಾಗೂ ಸಾಮಾಜಿಕ ನ್ಯಾಯ ಸಮಿತಿಗಳ ಅಧ್ಯಕ್ಷರಾಗಿ, ಉತ್ತಮ ಸೇವೆ ಸಲ್ಲಿಸಿದ್ದು ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆಯಿಂದ ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿದ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಇಂದು ಒಬ್ಬ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೆಂಗಳೂರು ಮಹಾನಗರ ಪಾಲಿಕೆ ಸದಸ್ಯರಾಗಿದ್ದಂತಹ ಶ್ರೀ. ಯಜಮಾನ್ ಸಿ.ಕೃಷ್ಣಪ್ಪ ರವರು ದಿನಾಂಕ:08-09-2010 ರಂದು ಸಂಜೆ ದೈವಾಧೀನರಾಗಿದ್ದು, ದಿವಂಗತರು ನಗರ ಪಾಲಿಕೆಗೆ 2 ಬಾರಿ ಸದಸ್ಯರಾಗಿ ಆಯ್ಕೆಯಾಗಿದ್ದು, ಆಡಳಿತ ಪಕ್ಷದ ನಾಯಕರಾಗಿ, ಕಾಮಗಾರಿ, ತೆರಿಗೆ ಮತ್ತು ಆರ್ಥಿಕ ಸ್ಥಾಯಿ ಸಮಿತಿ, ಶಿಕ್ಷಣ ಹಾಗೂ ಸಾಮಾಜಿಕ ನ್ಯಾಯ ಸಮಿತಿಗಳ ಅಧ್ಯಕ್ಷರಾಗಿ, ಉತ್ತಮ ಸೇವೆ ಸಲ್ಲಿಸಿದ್ದು ಹಾಗೂ ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥ ಸೇವೆಯಿಂದ ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ. ದಿವಂಗತರು ಸಲ್ಲಿಸಿದ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದ ಇಂದು ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರ ಆತ್ಮಕ್ಕೆ ಚಿರಶಾಂತಿಯನ್ನು ಕರುಣಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಸಭೆಯು ಪ್ರಾರ್ಥಿಸುತ್ತದೆ".

ಎಸ್.ಕೆ.ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು

## ದಿನಾಂಕ:29-09-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

### ವಿಷಯದ ಸಂಖ್ಯೆ:117/2010-11

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಪಂಡಿತ ಪುಟ್ಟರಾಜ ಪಂಚಾಕ್ಷರ ಗವಾಯಿಯವರು ದಿನಾಂಕ:17-09-2010 ರ ಶುಕ್ರವಾರದಂದು ಲಿಂಗೈಕ್ಯರಾಗಿರುವ ವಿಷಯವನ್ನು ಸಭೆಗೆ ತಿಳಿಸಲು ದು:ಖವಾಗುತ್ತದೆ. ಪುಟ್ಟಯ್ಯಜ್ಜ ಎಂಬ ಹೆಸರಿನಿಂದ ಖ್ಯಾತಿ ಪಡೆದ ಪೂಜ್ಯರು ತ್ರಿಭಾಷಾ ಪಂಡಿತರಾಗಿ, ಪುರಾಣ, ನಾಟಕ, ಸಂಗೀತ, ಗ್ರಂಥಗಳು, ಕೃತಿಗಳನ್ನು ರಚಿಸಿದ್ದು, ಶ್ರೇಷ್ಠ ಗಾಯಕರಾಗಿ, ಗಾನಯೋಗಿಗಳಾಗಿ ಜನಮನದಲ್ಲಿ ರಾರಾಜಿಸುತ್ತಿದ್ದಾರೆ. ಪಂಡಿತ ಪುಟ್ಟರಾಜ ಗವಾಯಿ ಅವರು ಪುರಾಣ ಪ್ರವಚನ, ರಂಗಭೂಮಿ ಮತ್ತು ಧಾರ್ಮಿಕ ಕ್ಷೇತ್ರ, ವೃತ್ತಿ ರಂಗ ಭೂಮಿ, ಪತ್ರಿಕೋದ್ಯಮ, ಸಾಂಸ್ಕೃತಿಕ ರಂಗದಲ್ಲಿಯೂ ಸೇವೆ ಸಲ್ಲಿಸಿದ್ದು, ಅಂಧರಿಗಾಗಿ ಆಶ್ರಮ ನಡೆಸುತ್ತಾ, ಅವರಿಗೆ ಶಿಕ್ಷಣ ಹಾಗೂ ಅನ್ನದಾಸೋಹ ಒದಗಿಸಿರುತ್ತಾರೆ. ದಿವಂಗತರು ರಾಷ್ಟ್ರಕ್ಕೆ ಸಲ್ಲಿಸಿರುವ ಸೇವೆಯು ಅಮೋಘವಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಅವರ ಅನುಯಾಯಿಗಳು, ಶಿಷ್ಯಕೋಟಿಯು ಅನಾಥರಾಗಿದ್ದಾರೆ.

ಈ ಸಂದರ್ಭದಲ್ಲಿ ಪಂಡಿತ ಪುಟ್ಟರಾಜ ಪಂಚಾಕ್ಷರ ಗವಾಯಿಯವರು ರಾಷ್ಟ್ರಕ್ಕೆ ಸಲ್ಲಿಸಿರುವ ಸೇವೆಯನ್ನು ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಅವರ ಶಿಷ್ಯಕೋಟಿ ಹಾಗೂ ಅನುಯಾಯಿಗಳಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಹಾಗೂ ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

<u>ನಿರ್ಣಯ:</u> "ಪಂಡಿತ ಪುಟ್ಟರಾಜ ಪಂಚಾಕ್ಷರ ಗವಾಯಿಯವರು ದಿನಾಂಕ:17-09-2010 ರ ಶುಕ್ರವಾರದಂದು ಲಿಂಗೈಕ್ಯರಾಗಿರುವ ವಿಷಯವನ್ನು ಸಭೆಗೆ ತಿಳಿಸಲು ದು:ಖವಾಗುತ್ತದೆ. ಪುಟ್ಟಯ್ಯಜ್ಜ ಎಂಬ ಹೆಸರಿನಿಂದ ಖ್ಯಾತಿ ಪಡೆದ ಪೂಜ್ಯರು ತ್ರಿಭಾಷಾ ಪಂಡಿತರಾಗಿ, ಪುರಾಣ, ನಾಟಕ, ಸಂಗೀತ, ಗ್ರಂಥಗಳು, ಕೃತಿಗಳನ್ನು ರಚಿಸಿದ್ದು, ಶ್ರೇಷ್ಠ ಗಾಯಕರಾಗಿ, ಗಾನಯೋಗಿಗಳಾಗಿ ಜನಮನದಲ್ಲಿ ರಾರಾಜಿಸುತ್ತಿದ್ದಾರೆ. ಪಂಡಿತ ಪುಟ್ಟರಾಜ ಗವಾಯಿ ಅವರು ಪುರಾಣ ಪ್ರವಚನ, ರಂಗಭೂಮಿ ಮತ್ತು ಧಾರ್ಮಿಕ ಕ್ಷೇತ್ರ, ವೃತ್ತಿ ರಂಗ ಭೂಮಿ, ಪತ್ರಿಕೋದ್ಯಮ, ಸಾಂಸ್ಕೃತಿಕ

ರಂಗದಲ್ಲಿಯೂ ಸೇವೆ ಸಲ್ಲಿಸಿದ್ದು, ಅಂಧರಿಗಾಗಿ ಆಶ್ರಮ ನಡೆಸುತ್ತಾ, ಅವರಿಗೆ ಶಿಕ್ಷಣ ಹಾಗೂ ಅನ್ನದಾಸೋಹ ಒದಗಿಸಿರುತ್ತಾರೆ. ದಿವಂಗತರು ರಾಷ್ಟ್ರಕ್ಕೆ ಸಲ್ಲಿಸಿರುವ ಸೇವೆಯು ಅಮೋಘವಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಅವರ ಅನುಯಾಯಿಗಳು, ಶಿಷ್ಯಕೋಟಿಯು ಅನಾಥರಾಗಿದ್ದಾರೆ.

ಈ ಸಂದರ್ಭದಲ್ಲಿ ಪಂಡಿತ ಪುಟ್ಟರಾಜ ಪಂಚಾಕ್ಷರ ಗವಾಯಿಯವರು ರಾಷ್ಟ್ರಕ್ಕೆ ಸಲ್ಲಿಸಿರುವ ಸೇವೆಯನ್ನು ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಅವರ ಶಿಷ್ಯಕೋಟಿ ಹಾಗೂ ಅನುಯಾಯಿಗಳಿಗೆ ದು:ಖವನ್ನು ಭರಿಸುವ ಶಕ್ತಿಯನ್ನು ಭಗವಂತನು ದಯಪಾಲಿಸಲೆಂದು ಹಾಗೂ ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಭಗವಂತನಲ್ಲಿ ಸಭೆಯು ಪ್ರಾರ್ಥಿಸುತ್ತದೆ".

ಎಸ್.ಕೆ.ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು

## ದಿನಾಂಕ:29-09-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:118/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ನಮ್ಮ ಚಲನಚಿತ್ರದ ಹಿರಿಯ ನಟರಾದಂತಹ ಶ್ರೀಯುತ ರತ್ನಾಕರ್ ರವರು ನಿಧನ ಹೊಂದಿರುತ್ತಾರೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಈ ಸಭೆಯು ತೀರ್ಮಾನಿಸುತ್ತದೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ನಮ್ಮ ಚಲನಚಿತ್ರದ ಹಿರಿಯ ನಟರಾದಂತಹ ಶ್ರೀಯುತ ರತ್ನಾಕರ್ ರವರು ನಿಧನ ಹೊಂದಿರುತ್ತಾರೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಈ ಸಭೆಯು ಪ್ರಾರ್ಥಿಸುತ್ತದೆ".

ಎಸ್.ಕೆ. ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:29–09–2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:119/2010--11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಶ್ರೀಮತಿ. ವೈಶಾಲಿ ಕಾಸರವಳ್ಳಿಯವರು ಚಲನಚಿತ್ರ ನಟರು. ನಾಟಕ, ರಂಗಭೂಮಿ ನಟರಾಗಿದ್ದು, ಬಹಳ ಪ್ರಖ್ಯಾತಿ ಹೊಂದಿದ್ದು, ಅವರು ದೈವಾಧೀನರಾಗಿರುತ್ತಾರೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಈ ಸಭೆಯು ತೀರ್ಮಾನಿಸುತ್ತದೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಶ್ರೀಮತಿ. ವೈಶಾಲಿ ಕಾಸರವಳ್ಳಿಯವರು ಚಲನಚಿತ್ರ ನಟರು. ನಾಟಕ, ರಂಗಭೂಮಿ ನಟರಾಗಿದ್ದು, ಬಹಳ ಪ್ರಖ್ಯಾತಿ ಹೊಂದಿದ್ದು, ಅವರು ದೈವಾಧೀನರಾಗಿರುತ್ತಾರೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಈ ಸಭೆಯು ಪ್ರಾರ್ಥಿಸುತ್ತದೆ".

ಎಸ್.ಕೆ.ನಟರಾಜ

(ಎಸ್.ಕೆ. ನಟರಾಜ)
ಮಹಾಪೌರರು

## ದಿನಾಂಕ:29-09-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ:120/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ರಂಗಭೂಮಿಯಲ್ಲಿ ಅಪಾರ ಖ್ಯಾತಿ ಹೊಂದಿದಂತಹ ಶ್ರೀ. ನಾಗೇಶ್‌ರವರು ನಿಧನ ಹೊಂದಿರುತ್ತಾರೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಈ ಸಭೆಯು ತೀರ್ಮಾನಿಸುತ್ತದೆ.

ಶ್ರೀ.ಸಿ.ಕೆ.ರಾಮಮೂರ್ತಿರವರು, ಶ್ರೀ.ಬಿ.ಎಸ್.ಸತ್ಯನಾರಾಯಣರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ರಂಗಭೂಮಿಯಲ್ಲಿ ಅಪಾರ ಖ್ಯಾತಿ ಹೊಂದಿದಂತಹ ಶ್ರೀ. ನಾಗೇಶ್‌ರವರು ನಿಧನ ಹೊಂದಿರುತ್ತಾರೆ. ಅವರ ಆತ್ಮಕ್ಕೆ ಶಾಂತಿ ದೊರಕಲೆಂದು ಈ ಸಭೆಯು ಪ್ರಾರ್ಥಿಸುತ್ತದೆ".

ಎಸ್.ಕೆ. ನಟರಾಜ

**(ಎಸ್.ಕೆ. ನಟರಾಜ)**
ಮಹಾಪೌರರು

## ದಿನಾಂಕ:27–11–2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ: 153/2010–11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

1988 ರಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರಾಗಿದ್ದ, ಡಾ॥ ಎಂ.ಜಿ.ಶೇಷಾದ್ರಿ ರವರು ದಿನಾಂಕ:08–11–2010 ರಂದು ದೈವಾಧೀನರಾಗಿದ್ದು, ದಿವಂಗತರು ಮಹಾನಗರ ಪಾಲಿಕೆ ಸದಸ್ಯರಾಗಿ 5 ಬಾರಿ ಚುನಾಯಿತರಾಗಿದ್ದು, ವೃತ್ತಿಯಲ್ಲಿ ವೈದ್ಯರಾಗಿ ಬಡವರಿಗೆ – ದೀನ ದಲಿತರಿಗೆ ತಮ್ಮ ಅಮೂಲ್ಯ ಸೇವೆಯನ್ನು ಉಚಿತವಾಗಿ ಸಲ್ಲಿಸಿರುತ್ತಾರೆ. ದಿವಂಗತರು ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥತತೆಯಿಂದ ಸೇವೆ ಸಲ್ಲಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ. ಗಂಗಭೈರಯ್ಯ ರವರು, ಶ್ರೀ. ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "1988 ರಲ್ಲಿ ಬೆಂಗಳೂರು ಮಹಾನಗರ ಪಾಲಿಕೆಯ ಮಹಾಪೌರರಾಗಿದ್ದ, ಡಾ॥ ಎಂ.ಜಿ.ಶೇಷಾದ್ರಿ ರವರು ದಿನಾಂಕ:08–11–2010 ರಂದು ದೈವಾಧೀನರಾಗಿದ್ದು, ದಿವಂಗತರು ಮಹಾನಗರ ಪಾಲಿಕೆ ಸದಸ್ಯರಾಗಿ 5 ಬಾರಿ ಚುನಾಯಿತರಾಗಿದ್ದು, ವೃತ್ತಿಯಲ್ಲಿ ವೈದ್ಯರಾಗಿ ಬಡವರಿಗೆ – ದೀನ ದಲಿತರಿಗೆ ತಮ್ಮ ಅಮೂಲ್ಯ ಸೇವೆಯನ್ನು ಉಚಿತವಾಗಿ ಸಲ್ಲಿಸಿರುತ್ತಾರೆ. ದಿವಂಗತರು ಸಾರ್ವಜನಿಕ ಕ್ಷೇತ್ರದಲ್ಲಿ ನಿಸ್ವಾರ್ಥತತೆಯಿಂದ ಸೇವೆ ಸಲ್ಲಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗೆ ದುಡಿದವರಾಗಿರುತ್ತಾರೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಅಗಲಿಕೆಯಿಂದಾಗಿ ಇಂದು ಒಬ್ಬ ಹಿರಿಯ ರಾಜಕಾರಣಿಯನ್ನು ಕಳೆದುಕೊಂಡಂತಾಗಿದೆ. ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಸಭೆಯು ಪ್ರಾರ್ಥಿಸುತ್ತದೆ".

(ಎಸ್.ದಯಾನಂದ್)
ಉಪ ಮಹಾಪೌರರು

# ದಿನಾಂಕ:27-11-2010 ರಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಸಭೆಯಲ್ಲಿ ಮಂಡಿಸಲಾದ ಸಂತಾಪ ಸೂಚಕ ನಿರ್ಣಯ

**ವಿಷಯದ ಸಂಖ್ಯೆ: 154/2010-11**

ಶ್ರೀ.ಬಿ.ಎಸ್.ಸತ್ಯನಾರಾಯಣ, ಆಡಳಿತ ಪಕ್ಷದ ನಾಯಕರು ಈ ಕೆಳಕಂಡ ನಿರ್ಣಯವನ್ನು ಮಂಡಿಸಿದರು.

ಬೆಂಗಳೂರು ಮಹಾನಗರ ಪಾಲಿಕೆಯ ಮಾಜಿ ಸದಸ್ಯರಾದ ಜಯಕುಮರೇಶನ್ ರವರು ದಿನಾಂಕ:15-11-2010 ರಂದು ಹೃದಯಘಾತದಿಂದ ನಿಧನರಾಗಿರುತ್ತಾರೆ. ಸದರಿಯವರು ನಗರ ಪಾಲಿಕೆ ಸದಸ್ಯರಾಗಿ, ಕಾಮಗಾರಿ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಪ್ರಾರ್ಥಿಸುತ್ತೇನೆ.

ಶ್ರೀ. ಗಂಗಭೈರಯ್ಯ ರವರು, ಶ್ರೀ. ಬಿ.ಎಸ್.ಸತ್ಯನಾರಾಯಣ ರವರು ಮಂಡಿಸಿದ ನಿರ್ಣಯವನ್ನು ಅನುಮೋದಿಸಿದರು.

ಮಹಾಪೌರರು ಮೇಲ್ಕಂಡ ನಿರ್ಣಯವನ್ನು ಮತಕ್ಕೆ ಹಾಕಲಾಗಿ ನಿರ್ಣಯವು ಸರ್ವಾನುಮತದಿಂದ ಅಂಗೀಕೃತವಾಯಿತು.

**ನಿರ್ಣಯ:** "ಬೆಂಗಳೂರು ಮಹಾನಗರ ಪಾಲಿಕೆಯ ಮಾಜಿ ಸದಸ್ಯರಾದ ಜಯಕುಮರೇಶನ್ ರವರು ದಿನಾಂಕ:15-11-2010 ರಂದು ಹೃದಯಘಾತದಿಂದ ನಿಧನರಾಗಿರುತ್ತಾರೆ. ಸದರಿಯವರು ನಗರ ಪಾಲಿಕೆ ಸದಸ್ಯರಾಗಿ, ಕಾಮಗಾರಿ ಸ್ಥಾಯಿ ಸಮಿತಿಯ ಅಧ್ಯಕ್ಷರಾಗಿ ಕಾರ್ಯನಿರ್ವಹಿಸಿದ್ದು, ಬೆಂಗಳೂರು ಮಹಾನಗರದ ಅಭಿವೃದ್ಧಿಗಾಗಿ ಶ್ರಮಿಸಿರುತ್ತಾರೆ.

ದಿವಂಗತರು ಸಲ್ಲಿಸಿರುವ ಸೇವೆಯನ್ನು ಇಂದು ನಾವೆಲ್ಲರೂ ಸ್ಮರಿಸಬೇಕಾಗಿದ್ದು, ದಿವಂಗತರ ಆತ್ಮಕ್ಕೆ ಚಿರಶಾಂತಿ ಲಭಿಸಲೆಂದು ಹಾಗೂ ದಿವಂಗತರ ಅಗಲಿಕೆಯಿಂದಾಗಿ ಅವರ ಕುಟುಂಬ ವರ್ಗದವರಿಗೆ ಉಂಟಾಗಿರುವ ದು:ಖವನ್ನು ಭರಿಸುವ ಶಕ್ತಿ ದೊರೆಯಲೆಂದು ಭಗವಂತನಲ್ಲಿ ಸಭೆಯು ಪ್ರಾರ್ಥಿಸುತ್ತದೆ".

(ಎನ್.ದಯಾನಂದ್)
ಉಪ ಮಹಾಪೌರರು